196

146ನೇ ಅಧಿವೇಶನ ಕಂಪ್ಯೂಟರ್ ಶಾಖೆ R/K ನಿ-330 ಕ್ರ-97

<u>ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್. ರವಿ, ಇವರು ನಿಯಮ-330ರಡಿ</u>
<u>ಮಂಡಿಸಿರುವ ಪ್ರಸ್ತಾವನೆಗೆ ಉತ್ತರ</u>

ವಿಷಯ:-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಪ್ರತಿವರ್ಷ ಸಾವಿರಾರು ಕೋಟಿಗಳ ಅನುದಾನವನ್ನು ಅಭಿವೃದ್ಧಿ ಕಾಮಗಾರಿಗಳಿಗಾಗಿ ವ್ಯಯಿಸುತ್ತಿದ್ದು, ಈ ಕಾಮಗಾರಿಗಳನ್ನು ಪಾರದರ್ಶಕವಾಗಿ ಕೈಗೊಳ್ಳದೇ ಸರ್ಕಾರದ ಹಣ ದುರುಪಯೋಗವಾಗಿರುವ ಹಲವಾರು ಪ್ರಕರಣಗಳ ಬಗ್ಗೆ ದಿನಪತ್ರಿಕೆಗಳು ಬೆಳಕು ಚೆಲ್ಲಿವೆ. ಹಾಗೆಯೇ ಕೆಲವು ಪ್ರಕರಣಗಳಿಗೆ ಮಾನ್ಯ ಲೋಕಾಯುಕ್ತ ಸಂಸ್ಥೆಯಿಂದ ತನಿಖೆ ನಡೆದು ಸರ್ಕಾರಕ್ಕೆ ವರದಿ ಸಲ್ಲಿಕೆಯಾಗಿದೆ. ಈ ಕಾಮಗಾರಿಗಳಲ್ಲಿ ಅಕ್ರಮ ನಡೆದಿರುವ ಬಗ್ಗೆ ವರದಿ ನೀಡಿರುವ ಹಿನ್ನೆಲೆಯಲ್ಲಿ, ಸರ್ಕಾರ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗಳು ಸದರಿ ಪ್ರಕರಣಗಳ ಕುರಿತು ಯಾವ ರೀತಿ ಕ್ರಮ ಕೈಗೊಂಡಿವೆ ಈ ಬಗ್ಗೆ ಅಕ್ರಮ ತಡೆಗಟ್ಟುವ ಕುರಿತು ಸದನದಲ್ಲಿ ಮಾನ್ಯ ಮುಖ್ಯಮಂತ್ರಿಗಳ ಬಳಿ ವಿಷಯವನ್ನು ಪ್ರಸ್ತಾಪಿಸ ಬಯಸುತ್ತೇನೆ.

ಉತ್ತರ:-

ಮಾನ್ಯ ಲೋಕಸಭಾ ಸದಸ್ಯರು, ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ, ಇವರು ರಾಜರಾಜೇಶ್ವರಿನಗರ ವಿಧಾನ ಸಭಾ ಕ್ಷೇತ್ರದಲ್ಲಿ 2019-20ನೇ ಸಾಲಿನಲ್ಲಿ ಕಾಮಗಾರಿಗಳಲ್ಲಿ ಅವ್ಯವಹಾರ ನಡೆದಿದೆ ಎಂದು ಮಾನ್ಯ ಲೋಕಾಯುಕ್ತಕ್ಕೆ ದೂರನ್ನು ಸಲ್ಲಿಸಿದ್ದ ಹಿನ್ನೆಲೆಯಲ್ಲಿ, ಈ ಬಗ್ಗೆ ಮಾನ್ಯ ಲೋಕಾಯುಕ್ತ ಇವರು ಪ್ರಾಥಮಿಕ ತನಿಖೆಯನ್ನು ನಡೆಸಿ ಸರ್ಕಾರಕ್ಕೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12 (3)ರ ಪ್ರಕಾರ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯು ದಿನಾಂಕ: 28-01-2022ರಂದು ಸರ್ಕಾರದ ನಗರಾಭಿವೃದ್ಧಿ ಇಲಾಖೆಯಲ್ಲಿ ಸ್ವೀಕೃತವಾಗಿದ್ದು, ಸದರಿ ವರದಿಯನ್ನು ನಿಯಮಗಳನ್ವಯ ಸೂಕ್ತ ಕ್ರಮ ಕೈಗೊಳ್ಳಲು ಪರಿಶೀಲಿಸಲಾಗುತ್ತಿದೆ.

---

ಸಂಖ್ಯೆ: ನಅಇ **132** ಎಂಎನ್‌ಯು **2022** (ಇ)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ